# ಪಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು ವಿರಾಜಪೇಟೆ

## ಸಿ.ಸಿ. ಸಂಖ್ಯೆ 176/2023

ಚಾಸಾ ಃ 12

ಪ್ರಾಸಾ ಃ 7

| | | |
|---|---|---|
| **ಹೆಸರು** | : | ಶ್ರೀಧರ್ ಸಿ ವಿ |
| **ತಂದೆಯ ಹೆಸರು** | : | ವಿ ವಾಮಣ್ಣ |
| **ವಯಸ್ಸು** | : | 53 ವರ್ಷ |
| **ಉದ್ಯೋಗ** | : | ಪಿ ಎಸ್ ಐ, ಮಡಿಕೇರಿ ಸಂಚಾರಿ ದಳ, |
| **ವಾಸಸ್ಥಳ** | : | ಮಡಿಕೇರಿ |

**ದಿನಾಂಕ ಃ 11-12-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ಃ ಮಾನ್ಯ ಸ. ಸ. ಅ. ರವರಿಂದ ಃ -**

1. ನಾನು ಜುಲೈ 2022 ರಿಂದ ಆಗಸ್ಟ್ 2023 ರವರೆಗೆ ವಿರಾಜಪೇಟೆ ನಗರ ಪೊಲೀಸ್ ಠಾಣೆಯಲ್ಲಿ ಪಿ ಎಸ್ ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

2. ದಿನಾಂಕ 27-12-2022 ರಂದು ಪ್ರಕರಣದ ಕಡತವನ್ನು ಚಾಸಾ11 ರವರಿಂದ ಪಡೆದುಕೊಂಡು ಕಡತವನ್ನು ಪರಿಶೀಲಿಸಿರುತ್ತೇನೆ. ನಂತರ ದಿನಾಂಕ 28-12-2022 ರಂದು ಚಾಸಾ1 ರವರ ಅಪರಾಧ ಪ್ರಕ್ರಿಯೆ ಸಂಹಿತೆ ಕಲಂ 164 ರಡಿಯಲ್ಲಿ ಹೇಳಿಕೆಯನ್ನು ನ್ಯಾಯಾಲಯದಿಂದ ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ನಂತರ ದಿನಾಂಕ 02-01-2023 ರಂದು ಆರೋಪಿಯು ವಾಸವಾಗಿದ್ದ ಮನೆಯ ಬಾಡಿಗೆ ಕರಾರು ಪತ್ರವನ್ನು ಪಡೆದುಕೊಂಡು, ಪ್ರಕರಣದ ತನಿಖೆ ಪೂರ್ಣಗೊಂಡಿದ್ದರಿಂದ ಅದೇ ದಿನ ಆರೋಪಿಯ ವಿರುದ್ಧ ಆರೋಪ ಸಾಬೀತಾಗಿದ್ದರಿಂದ ನ್ಯಾಯಾಲಯಕ್ಕೆ ಅಂತಿಮ ವರದಿಯನ್ನು ಸಲ್ಲಿಸಿರುತ್ತೇನೆ. ಆರೋಪಿಯನ್ನು ನೋಡಿದರೆ ಗುರುತಿಸುತ್ತೇನೆ. ಆರೋಪಿ ಗೈರು ಹಾಜರಾಗಿದ್ದು, ಆರೋಪಿ ಪರ ವಕೀಲರು ಹಾಜರಾತಿ ವಿನಾಯಿತಿ ಅರ್ಜಿಯನ್ನು ಸಲ್ಲಿಸಿದ್ದು, ಆರೋಪಿಯ ಗುರುತಿಸುವಿಕೆ ಬಗ್ಗೆ ತಕರಾರು ಇರುವುದಿಲ್ಲವೆಂದು ಪರಿಗಣಿಸಲಾಯಿತು.

3. ಸಾಕ್ಷಿಯು ಬಾಡಿಗೆ ಕರಾರು ಪತ್ರವನ್ನು ನೋಡಿ ಗುರುತಿಸಿದ್ದನ್ನು ನಿಪಿ13 ಎಂದು ಗುರುತಿಸಲಾಯಿತು. ಸಾಕ್ಷಿಯು ತನ್ನ ಸಹಿಯನ್ನು ನೋಡಿ ಗುರುತಿಸಿದ್ದನ್ನು

ನಿಪಿ13(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಭಾವಚಿತ್ರಗಳನ್ನು ನೋಡಿ ಗುರುತಿಸಿದ್ದನ್ನು ಈಗಾಗಲೇ ನಿಪಿ 3 ರಿಂದ 8 ಎಂದು ಗುರುತಿಸಲಾಗಿದೆ.

ಮುಖ್ಯ ವಿಚಾರಣೆ ಮುಕ್ತಾಯ.

**<u>ಪಾಟಿ ಸವಾಲು ಃ ಆರೋಪಿ ಪರ ಶ್ರೀಮತಿ. ವಿ ಸಿ ಪಿ ವಕೀಲರಿಂದ ಃ</u>**

1. ನಾನು ಯಾವುದೇ ಮುಂದುವರೆದ ತನಿಖೆಯನ್ನು ನಡೆಸಿರುವುದಿಲ್ಲ ಎಂದರೆ ಸರಿಯಲ್ಲ. ನಿಪಿ13 ನ್ನು ಆರೋಪಿ ಕಡೆಯಿಂದ ಪಡೆದುಕೊಂಡಿರುತ್ತೇನೆ. ಮನೆಯ ಬಾಡಿಗೆಯ ಮುಂಗಡ ಹಣವನ್ನು ಯಾರು ನೀಡಿರುತ್ತಾರೆಂದು ನಾನು ತಿಳಿದುಕೊಂಡಿಲ್ಲ. ನಿಪಿ3 ರಿಂದ 8 ಸೃಷ್ಟಿ ಮಾಡಿರುವ ದಾಖಲೆಗಳು ಎಂದರೆ ಸರಿಯಲ್ಲ. ಆರೋಪಿಗೂ ಹಾಗೂ ಈ ಪ್ರಕರಣಕ್ಕೂ ಯಾವುದೇ ಸಂಬಂಧ ಇರುವುದಿಲ್ಲ ಎಂದರೆ ಸರಿಯಲ್ಲ. ಆರೋಪಿಯು ಘಟನೆ ನಡೆದಿದೆ ಎಂದು ಹೇಳಿದ ದಿನ ಊರಲ್ಲಿ ಇರಲಿಲ್ಲ ಎಂದರೆ ಸರಿಯಲ್ಲ. ಆರೋಪಿಯ ವಿರುದ್ದ ಸುಳ್ಳು ಅಂತಿಮ ವರದಿಯನ್ನು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

ಪಾಟಿ ಸವಾಲು ಮುಕ್ತಾಯ.

ಮರು ವಿಚಾರಣೆಃ ಇಲ್ಲ.

( ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಿಂದ ಬೆರಳಚ್ಚು ಪಡಿಸಲಾಯಿತು.)
ಓ ಹೇ ಕೇ ಸ ಇದೆ,

ಸಹಿ/-
(ಪ್ರದೀಪ ಪೋತದಾರ)
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂ., ವಿರಾಜಪೇಟೆ